ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿಧನ, ನಿವೃತ್ತಿ, ರಾಜೀನಾಮೆ ಮತ್ತು ಅನುಮೋದಿತ ಬಡ್ತಿಯಿಂದ ಉಂಟಾದ 282 ಬೋಧಕ ಹುದ್ದೆಗಳಿಗೆ ನೇಮಕ ಮಾಡಲು ಸರ್ಕಾರದ ಆದೇಶ ಸಂಖ್ಯೆ : ಇಡಿ 46 ಎಸ್‌ಇಪಿ 2006, ದಿನಾಂಕ : 12-08-2006 ರನ್ವಯ ಅರ್ಹತೆ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಲು ಅನುಮತಿ ನೀಡಲಾಗಿದೆ.

ಸರ್ಕಾರವು ಈಗಾಗಲೇ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ 205 ಉಪನ್ಯಾಸಕರುಗಳಿಗೆ ಪ್ರಾಂಶುಪಾಲರಾಗಿ ಪದೋನ್ನತಿ ನೀಡಲು ನಿರ್ಣಯಿಸಿದ್ದು, ಶೀಘ್ರವಾಗಿ ಕೌನ್ಸಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲಾಗುವುದು. ದಿನಾಂಕ :12-07-2007 ಮತ್ತು 13-07-2007 ರಂದು ಸುಮಾರು 1200 ಪ್ರೌಢ ಶಾಲಾ ಸಹ ಶಿಕ್ಷಕರುಗಳಿಗೆ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡಿದ್ದು, ಕೌನ್ಸಲಿಂಗ್ ಮೂಲಕ ಸ್ಥಳ ನಿಯುಕ್ತಿ ಮಾಡಲಾಗಿದೆ. ಹಾಗೆಯೇ ಈಗಾಗಲೇ 2175 ಉಪನ್ಯಾಸಕರನ್ನು ಆಯ್ಕೆ ಮಾಡುವಂತೆ ಕರ್ನಾಟಕ ಲೋಕ ಸೇವಾ ಆಯೋಗವನ್ನು ಕೋರಲಾಗಿದೆ. ಆಯ್ಕೆ ಪಟ್ಟಿ ಬಂದ ನಂತರ ಹುದ್ದೆಗಳನ್ನು ತುಂಬಲಾಗುವುದು.

ಇ) ಕ್ರಮ ಸಂಖ್ಯೆ : 'ಆ' ರಲ್ಲಿ ಉತ್ತರ ನೀಡಿರುವಂತೆ ಹುದ್ದೆಗಳನ್ನು ತುಂಬಲಾಗುತ್ತಿದ್ದು, ಈ ಮಧ್ಯದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಹತ್ತಿರದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರನ್ನು ನಿಯೋಜಿಸುವ ಮೂಲಕ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗಿದೆ.

ಈ) ಸರ್ಕಾರಿ ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ 30 ಬೋಧಕ ಹುದ್ದೆಗಳು ಹಾಗೂ 14 ಬೋಧಕೇತರ ಹುದ್ದೆಗಳು ಖಾಲಿ ಇರುತ್ತವೆ.

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ ಒಟ್ಟು 26 ಉಪನ್ಯಾಸಕರ ಹಾಗೂ 07 ಬೋಧಕೇತರ ಸಿಬ್ಬಂದಿಗಳ ಕೊರತೆ ಇದೆ.

596 (984) ಶ್ರೀ ಸಿದ್ದು ಸವದಿ (ಜಮಖಂಡಿ) :- ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಮಖಂಡಿ ತಾಲ್ಲೂಕಿನ ಜೀವನಾಡಿಯಾದ ಕೃಷ್ಣಾ ನದಿಯು ಪ್ರತೀ ಬೇಸಿಗೆಯಲ್ಲಿ ಬತ್ತಿ ಹೋಗುವುದರಿಂದ ಬಾಂದಾರದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈಗಾಗಲೇ ನಮ್ಮೂರು ಬಾಂದಾರ ಯೋಜನೆ ಅಡಿ ತುಬಚಿ ಗ್ರಾಮದ ಮುಂದೆ ಬ್ರಿಡ್ಜ್ ಕಂ ಬಾಂದಾರದ ಪ್ರಸ್ತಾವನೆ ಕೊಡಲಾಗಿದೆ, ಅದು ಯಾವ ಹಂತದಲ್ಲಿದೆ;

ಇ) ಈ ಬಾಂದಾರ ಅತೀ 'ಜರೂರು ಇದ್ದು, ಇದೇ ವರ್ಷ ನಿರ್ಮಿಸಲು ಸಾಧ್ಯವೇ?

ಶ್ರೀ ಕೆ.ಎಸ್. ಈಶ್ವರಪ್ಪ (ಜಲ ಸಂಪನ್ಮೂಲ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿದೆ.

ಆ, ಇ) ನಮ್ಮೂರ ಬಾಂದಾರ ಯೋಜನೆ ಅಡಿ ಈ ಬಾಂದಾರ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. ಅಂತಹ ಪ್ರಸ್ತಾವನೆ ಬಂದಲ್ಲಿ ಕಾರ್ಯರೂಪಕ್ಕೆ ತರಲು ಪರಿಶೀಲಿಸಲಾಗುವುದು.

597 (985) ಶ್ರೀ ಸಿದ್ದು ಸವದಿ (ಜಮಖಂಡಿ) :– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸುವರ್ಣ ಗ್ರಾಮೋದಯ ಯೋಜನೆಯಲ್ಲಿ ಆಯ್ಕೆ ಮಾಡಿದ ಗ್ರಾಮಗಳ ಸಂಖ್ಯೆ ಎಷ್ಟು;

ಆ) ಎಷ್ಟು ಗ್ರಾಮಗಳಲ್ಲಿ ಈಗ ಅಭಿವೃದ್ಧಿ ಕೆಲಸಗಳು ಪ್ರಾರಂಭವಾಗಿವೆಯೇ;

ಇ) ಜಮಖಂಡಿ ತಾಲ್ಲೂಕಿನಲ್ಲಿ ಆಯ್ಕೆಯಾದ ಯಾವುದೇ ಗ್ರಾಮದಲ್ಲಿ ಇದುವರೆವಿಗೂ ಕೆಲಸಗಳು ಪ್ರಾರಂಭವಾಗಿಲ್ಲದಿರಲು ಕಾರಣಗಳೇನು;

ಈ) ಎಂದಿನಿಂದ ಈ ಯೋಜನೆಯನ್ನು ಪ್ರಾರಂಭಿಸಲಾಗುವುದು ಮತ್ತು ಯಾವಾಗ ಸಂಪೂರ್ಣ ಕ್ರಿಯಾ ಯೋಜನೆಯ ಪ್ರಕಾರ ಕೆಲಸವನ್ನು ಮುಕ್ತಾಯ ಮಾಡಲಾಗುವುದು?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):

ಅ) 1194 ಗ್ರಾಮಗಳು.

ಆ) 1083 ಗ್ರಾಮಗಳಲ್ಲಿ ಅಲ್ಪಾವಧಿ ಟೆಂಡರ್ ಪ್ರಕ್ರಿಯೆ ಪ್ರಾರಂಭವಾಗಿದೆ.

ಇ) ಜಿಲ್ಲೆಯಲ್ಲಿ ಆಯ್ಕೆಯಾದ 45 ಗ್ರಾಮಗಳ ಪೈಕಿ 44 ಗ್ರಾಮಗಳಲ್ಲಿನ ಅಭಿವೃದ್ಧಿ ಕೆಲಸಗಳ ಅಂದಾಜು ಪತ್ರಿಕೆಗಳನ್ನು ತಯಾರಿಸುವ ಕಾರ್ಯ ಪ್ರಗತಿಯಲ್ಲಿವೆ. ತಕ್ಷಣವೇ ಅಭಿವೃದ್ಧಿ ಕೆಲಸಗಳನ್ನು ಪ್ರಾರಂಭಿಸಲಾಗುವುದು.